**ಕರ್ನಾಟಕ ಸರ್ಕಾರ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಮ್‌ಎಫ್‌ಸಿ ನ್ಯಾಯಾಲಯ, ದೇವನಹಳ್ಳಿ**

**ಸಿಸಿ ನಂ. 3842/2021**

ಹೆಸರು : ಪ್ರಕಾಶ್

ತಂದೆಯ ಹೆಸರು : ವೆಂಕಟೇಶಪ್ಪ

ವಯಸ್ಸು : 37

ಉದ್ಯೋಗ : ವ್ಯವಸಾಯ

ವಾಸ : ಸಿಂಗಹಳ್ಳಿ ಗ್ರಾಮ.

CW-3, PW-2

**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು, ದಿನಾಂಕ. 21.03.2024**

**ಮುಖ್ಯ ವಿಚಾರಣೆ : ಎಪಿಪಿಯವರಿಂದಃ**

1. ದಿಃ09.03.2021 ರಂದು ಬೆಳಿಗ್ಗೆ 08.30 ಗಂಟೆಗೆ ನಾನು ತೋಟದಲ್ಲಿ ಕೆಲಸ ಮಾಡುವಾಗ ನಮ್ಮ ತೋಟದಲ್ಲಿ ಪಕ್ಕದಲ್ಲಿ ನೀಲಗಿರಿ ತೋಪು ಇದ್ದು, ಸದರಿ ತೋಪಿನಲ್ಲಿ ಆರೋಪಿಗಳು ನೀಲಗಿರಿ ಮರಗಳನ್ನು ಕಡಿಸುತ್ತಿದ್ದರು. ಆ ಸಮಯಕ್ಕೆ ಚಾಸಾ-1 ಮತ್ತು ಅವರ ಹೆಂಡತಿ ಬಂದು ಆರೋಪಿಗಳನ್ನು ಈ ಆಸ್ತಿಯ ಮೇಲೆ ಕೇಸು ಇದೆ ಯಾಕೆ ಯಾಕೆ ಮರಗಳನ್ನು ಕಡಿಸುತ್ತಿದ್ದೀರಿ ಎಂದು ಕೇಳಿದಾಗ, ಇದನ್ನು ಕೇಳಲು ನೀನು ಯಾರು ಎಂದು ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು, ಆರೋಪಿ 2 ಮತ್ತು 3 ರವರು ಚಾಸಾ-1 ರವರ ಕುತ್ತಿಗೆ ಪಟ್ಟಿಯನುನ ಹಿಡಿದುಕೊಂಡು ಹಲ್ಲೆ ಮಾಡಿದರು. ಆ ಸಮಯಕ್ಕೆ 1 ನೇ ಆರೋಪಿ ನೀಲಗಿರಿ ಮರದ ದೊಣ್ಣೆಯಿಂದ ಚಾಸಾ-1 ರವರ ಬೆನ್ನಿಗೆ ಹೊಡೆದರು, ಆಗ ಚಾಸಾ-1 ರವರು ಕುಸಿದು ಬಿದ್ದರು. ತಕ್ಷಣ ನಾವೆಲ್ಲರೂ ಅವರಿಗೆ ನೀರು ಕುಡಿಸಿದೆವು. ಆಗ ಚಾಸಾ-4 ರವರು ಕಾರು ತೆಗೆದುಕೊಂಡು ಬಂದಿದ್ದು ಚಾಸಾ-1 ರವರನ್ನು ಕರೆದುಕೊಂಡು ಹೋದರು. ಆರೋಪಿ ಚಾಸಾ-1 ರವರಿಗೆ ಹಲ್ಲೆ ಮಾಡಿದ್ದ ದೊಣ್ಣೆಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮು.ಮಾ-1 ನ್ನು ನೋಡಿ ಗುರುತಿಸಿರುತ್ತಾರೆ. ಚಾಸಾ-1 ರವರಿಗೆ ಹಲ್ಲೆ ಮಾಡಿದ ವ್ಯಕ್ತಿಗಳನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ 2 ಮತ್ತು 3 ನೇ ಆರೋಪಿಗಳನ್ನು ನೋಡಿ ಗುರುತಿಸಿರುತ್ತಾರೆ. 1 ನೇ ಆರೋಪಿ ಗೈರು ಹಾಜರಾಗಿದ್ದು, ಅವರನ್ನು ಗುರುತಿಸುವ ಬಗ್ಗೆ ಆರೋಪಿಯ ಪರ ವಕೀಲರು ಯಾವುದೇ ತಕರಾರು ಇಲ್ಲ ಎಂದು ತಿಳಿಸಿರುತ್ತಾರೆ.

**ಪಾಟೀ ಸವಾಲುಃ ಶ್ರೀ ಎನ್ ಕೆ ಜಿ ಆರೋಪಿ ಪರ ವಕೀಲರಿಂದಃ**

1. ನಾನು ಮತ್ತು ಚಾಸಾ-1 ರವರು ಒಟ್ಟಿಗೆ ಸಾಕ್ಷಿ ನುಡಿಯಲು ಬಂದಿದ್ದೇವೆ ಎಂದರೆ ಸರಿಯಲ್ಲ.

ಚಾಸಾ-1 ಮತ್ತು ಆರೋಪಿಗಳ ನಡುವೆ ಸಿವಿಲ್ ದಾವೆ ಇದ್ದು, ಸದರಿ ದಾವೆ ಯಾವ ರೀತಿ ತೀರ್ಮಾನ ಆಯಿತು ಎಂದು ನನಗೆ ಗೊತ್ತಿರುವುದಿಲ್ಲ ಎಂದರೆ ಸರಿ. ನಮ್ಮ ತೋಟದಿಂದ ಘಟನಾ ಸ್ಥಳಕ್ಕೆ ಸುಮಾರು 500 ಮೀಟರ್ ಅಂತರ ಇದೆ ಎಂದರೆ ಸರಿಯಲ್ಲ. ನಾವು ಮತ್ತು ಚಾಸಾ-1 ರವರು ಆತ್ಮೀಯವಾಗಿದ್ದೇವೆ ಎಂದರೆ ಸಾಕ್ಷಿ ಆರೋಪಿಗಳ ಜೊತೆಯಲ್ಲಿ ಸಹ ಆತ್ಮೀಯವಾಗಿದ್ದೆ ಎಂದು ನುಡಿಯುತ್ತಾರೆ. ಘಟನಾ ಸಮಯದಲ್ಲಿ ನಾನು ಸ್ಥಳದಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ಚಾಸಾ-1 ಮತ್ತು ಆರೋಪಿಗಳ ನಡುವೆ ಯಾವುದೇ ಗಲಾಟೆ ಆಗದೇ ಇದ್ದರೂ ಚಾಸಾ-1 ರವರಿಗೆ ಸಹಾಯ ಆಗಲೀ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗಳು ಚಾಸಾ-1 ರವರಿಗೆ ಹಲ್ಲೆ ಮಾಡಿರುವುದಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ ಮತ್ತು ಕೊಲೆ ಬೆದರಿಕೆ ಹಾಕಿರುವುದಿಲ್ಲ ಎಂದರೆ ಸರಿಯಲ್ಲ.

**(ಮರು ವಿಚಾರಣೆಃ ಇಲ್ಲ)**
**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಎ. ಒಪ್ಪಲಾಗಿದೆ.**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ದೇವನಹಳ್ಳಿ.**

**ಕರ್ನಾಟಕ ಸರ್ಕಾರ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಮ್‌ಎಫ್‌ಸಿ ನ್ಯಾಯಾಲಯ, ದೇವನಹಳ್ಳಿ**

**ಸಿಸಿ ನಂ. 3842/2021**

ಹೆಸರು : ಮುನಿರೆಡ್ಡಿ
ತಂದೆಯ ಹೆಸರು : ರಾಮಪ್ಪ
ವಯಸ್ಸು : 63
ಉದ್ಯೋಗ : ವ್ಯವಸಾಯ
ವಾಸ : ಸಿಂಗಹಳ್ಳಿ ಗ್ರಾಮ.

CW-1, PW-1

**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು, ದಿನಾಂಕ. 21.03.2024**

**ಮುಖ್ಯ ವಿಚಾರಣೆ : ಎಪಿಪಿಯವರಿಂದ:**

1. ಚಾಸಾ-4 ನನ್ನ ಮಗ, ಚಾಸಾ-2 ಮತ್ತು 3 ರವರ ಪರಿಚಯ ಇರುತ್ತದೆ. ಆರೋಪಿತರ ಪರಿಚಯ ಇರುತ್ತದೆ. ದಿ:09.03.2021 ರಂದು ಬೆಳಿಗ್ಗೆ 08.30 ಗಂಟೆಗೆ ನಾನು ನಮ್ಮ ಜಮೀನಿನ ಬಳಿ ಹೋಗಿದ್ದು, ನಮ್ಮ ಜಮೀನಿಗೆ ಸಂಬಂದಿಸಿದಂತೆ ವಿಭಾಗಕ್ಕಾಗಿ ಸಿವಿಲ್ ನ್ಯಾಯಾಲಯದಲ್ಲಿ ದಾವೆಗಳು ಚಾಲ್ತಿಯಲ್ಲಿರುತ್ತದೆ. ಆ ರೀತಿ ಸರ್ವೆ ನಂ.91/8 ರಲ್ಲಿ ನೀಲಗಿರಿ ತೋಪು ಇದ್ದು ಅದರಲ್ಲಿ ಇದ್ದ ಮರಗಳನ್ನು ಆರೋಪಿಗಳು ಮಾರಾಟ ಮಾಡಿ ಕಡಿಸುತ್ತಿದ್ದರು. ತಕ್ಷಣ ನಾನು ಮತ್ತು ನನ್ನ ಹೆಂಡತಿ ಸ್ಥಳಕ್ಕೆ ಹೋಗಿದ್ದು ಆಗ 3 ಜನ ಆರೋಪಿಗಳು ನೀಲಗಿರಿ ತೋಪಿನ ಬಳಿ ಇದ್ದು, ನಾನು ಸದರಿ 3 ಜನ ಆರೋಪಿಗಳನ್ನು ಯಾಕೆ ನೀಲಗಿರಿ ಮರಗಳನ್ನು ಕಡಿಸುತ್ತಿದ್ದೀರಿ ಈಗಾಗಲೇ ಸಿವಿಲ್ ದಾವೆ ವಿಭಾಗಕ್ಕಾಗಿ ಚಾಲ್ತಿಯಲ್ಲಿದೆ ಎಂದು ಕೇಳಿದಾಗ 2 ನೇ ಆರೋಪಿ ನನ್ನ ಕೈ ಹಿಡಿದು ಕೊಂಡಿದ್ದು, 3 ನೇ ಆರೋಪಿ ನನ್ನ ಕುತ್ತಿಗೆ ಪಟ್ಟಿ ಹಿಡಿದುಕೊಂಡನು. ಆಗ 1 ನೇ ಆರೋಪಿ ನೀಲಗಿರಿ ದೊಣ್ಣೆಯನ್ನು ತೆಗೆದುಕೊಂಡು ನನ್ನ ಬೆನ್ನಿಗೆ ಹೊಡೆದನು. ಆಗ ನಾನು ಜ್ಞಾನತಪ್ಪಿ ಕೆಳಗೆ ಬಿದ್ದಿದ್ದು, ನನ್ನ ಹೆಂಡತಿ ಬಾಯಿಬಡಿದು ಕೊಂಡು ಯಾರಿಗೋ ದೂರವಾಣಿ ಕರೆ ಮಾಡಿದ್ದರು, ಆಗ ಚಾಸಾ-3 ಮತ್ತು 4 ರವರು ನನ್ನನ್ನು ಮನಗೆ ಕರೆದುಕೊಂಡು ಬಂದು ನಂತರ ನನಗೆ ಉಸಿರು ಆಟದ ತೊಂದರೆ ಆದ ಕಾರಣ ಅವರು ನನಗೆ ಖಾಸಗಿ ಆಸ್ಪತ್ರೆಗೆ ಹೋಗಿ ಅಲ್ಲಿ ಪ್ರಥಮ ಚಿಕಿತ್ಸೆ ಪಡೆದುಕೊಂಡು ನಂತರ ಯಲಹಂಕ ಸರ್ಕಾರಿ ಆಸ್ಪತ್ರೆಗೆ ಹೋಗಿ ದಾಖಲಾಗಿರುತ್ತೇನೆ. ಮರು ದಿನ ನಾನು ಆಸ್ಪತ್ರೆಯಿಂದ ಬಂದು ದಿ:10.03.2021 ರಂದು ಬಾಗಲೂರು ಪೋಲಿಸರಿಗೆ ದೂರು ನೀಡಿರುತ್ತೇನೆ. ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ ಕಾರಣ ಅದನ್ನು ನಿಪಿ-1 ಎಂದು, ಸಾಕ್ಷಿಯ ಹೆಬ್ಬೆಟ್ಟಿನ ಗುರುತಿನ್ನು 1(ಎ) ಎಂದು ಗುರುತಿಸಲಾಯಿತು. ದಿ:11.03.2021 ರಂದು ಚಾಸಾ-8 ಮತ್ತು ಇಬ್ಬರು ಪೋಲಿಸ್ ಸಿಬ್ಬಂದಿಗಳು ಸ್ಥಳಕ್ಕೆ ಬಂದು ಮಹಜರ್ ಮಾಡಿರುತ್ತಾರೆ. ಆ ಸಮಯದಲ್ಲಿ ಚಾಸಾ-2 ಮತ್ತು 3 ರವರು

ಹಾಜರಿದ್ದರು. ಆ ಸಮಯದಲ್ಲಿ ಹಲ್ಲೆಗೆ ಉಪಯೋಗಿಸಿದ್ದ ದೊಣ್ಣೆಯನ್ನು ಸ್ವಾದೀನ ಪಡಿಸಿಕೊಂಡಿರುತ್ತಾತ ಆ ರೀತಿ ಮಹಜರ್ ಬರೆದು ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಸಾಕ್ಷಿಯು ಮಹಜರ್ ನ್ನು ನೋಡಿ ಗುರುತಿಸಿದ ಕಾರಣ ಅದನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು 2(ಎ) ಎಂದು ಗುರುತಿಸಲಾಯಿತು. ಆರೋಪಿ ನನಗೆ ಹಲ್ಲೆ ಮಾಡಿದ್ದ ದೊಣ್ಣೆಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ದೊಣ್ಣೆಯನ್ನು ನೋಡಿ ಗುರುತಿಸಿದ ಕಾರಣ ಅದನ್ನು ಮು.ಮಾ-1 ಎಂದು ಗುರುತಿಸಲಾಯಿತು. ನನಗೆ ಹಲ್ಲೆ ಮಾಡಿದ ವ್ಯಕ್ತಿಗಳನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ 2 ಮತ್ತು 3 ನೇ ಆರೋಪಿಗಳನ್ನು ನೋಡಿ ಗುರುತಿಸಿರುತ್ತಾರೆ. 1 ನೇ ಆರೋಪಿ ಗೈರು ಹಾಜರಾಗಿದ್ದು, ಅವರನ್ನು ಗುರುತಿಸುವ ಬಗ್ಗೆ ಆರೋಪಿಯ ಪರ ವಕೀಲರು ಯಾವುದೇ ತಕರಾರು ಇಲ್ಲ ಎಂದು ತಿಳಿಸಿರುತ್ತಾರೆ.

**ಪಾಟೀ ಸವಾಲುಃ ಶ್ರೀ ಎನ್ ಕೆ ಜಿ ಆರೋಪಿ ಪರ ವಕೀಲರಿಂದಃ**

1. ಸಿವಿಲ್ ದಾವೆ ಚಾಲ್ತಿಯಲ್ಲಿದ್ದ ಬಗ್ಗೆ ಪೋಲಿಸರಿಗೆ ದಾಖಲಾತಿ ಕೊಟ್ಟಿರುವುದಿಲ್ಲ ಎಂದರೆ ಸರಿ. ಸದರಿ ದಾವೆ ತೀರ್ಪು ಆಗಿರುತ್ತದೆ. ಮು.ಮಾ-1 ಎಲ್ಲಾ ಕಡೆ ಸಿಗುತ್ತದೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಮು.ಮಾ-1 ನ್ನು ನಾವೇ ಸೃಷ್ಟಿಮಾಡಿ ಪೋಲಿಸರಿಗೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ನೀಲಗಿರಿ ತೋಪಿನಲ್ಲಿ ಆರೋಪಿಗಳು ಮರಗಳನ್ನು ಕಡಿಯುತ್ತಿದ್ದ ಬಗ್ಗೆ ಪೋಟೋವನ್ನು ಪೋಲಿಸರಿಗೆ ಕೊಟ್ಟಿರುವುದಿಲ್ಲ ಎಂದರೆ ಸರಿ. ನಾನು ಒಬ್ಬನೇ ಹೋಗಿದ್ದು ನನ್ನ ಜೊತೆ ಯಾರು ಇರಲಿಲ್ಲ ಎಂದರೆ ಸರಿಯಲ್ಲ. ಸಿವಿಲ್ ದಾವೆಯಲ್ಲಿ ಆರೋಪಿಗಳ ಪರವಾಗಿ ತೀರ್ಪು ಆಗಿದೆ ಎಂದರೆ ಸರಿಯಲ್ಲ. ಆ ಕಾರಣದಿಂದ ನೀಲಗಿರಿ ತೋಪು ಆರೋಪಿಗಳಿಗೆ ಸೇರಿದ್ದು ಎಂದರೆ ಸರಿಯಲ್ಲ. ನಾನು ನೀಲಗಿರಿ ತೋಪಿಗೆ ಹೋಗಿರುವುದಿಲ್ಲ ಆರೋಪಿಗಳು ಯಾವುದೇ ಹಲ್ಲೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಸಿವಿಲ್ ದಾವೆಗೆ ಅನುಕೂಲವಾಗಲೀ ಎಂದು ಸುಳ್ಳು ದೂರು ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ. ಆ ಕಾರಣದಿಂದ ನಿಪಿ-1 ರಲ್ಲಿ ಇರುವ ವಿಚಾರವನುನ ಸೃಷ್ಟಿಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನನ್ನನ್ನು ಶೆಟ್ಟಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು. ಆ ರೀತಿ ನಾನು ಶೆಟ್ಟಿ ಆಸ್ಪತ್ರೆಗೆ ಹೋಗಿರುವುದಿಲ್ಲ ಯಾವುದೇ ಗಾಯ ಆಗಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಖಾಸಗಿ ಆಸ್ಪತ್ರೆಗೆ ಹೋಗಿರುವುದಿಲ್ಲ ಎಂದರೆ ಸರಿಯಲ್ಲ. ಯಲಹಂಕ ಸರ್ಕಾರಿ ಆಸ್ಪತ್ರೆಯಿಂದ ಸುಳ್ಳು ದಾಖಲೆಯನ್ನು ಸೃಷ್ಟಿಮಾಡಿಸಿದ್ದೇನೆ ಎಂದರೆ ಸರಿಯಲ್ಲ. ಪೋಲಿಸರು ಯಾವುದೇ ಮು.ಮಾ ನ್ನು ನನ್ನ ಸಮಕ್ಷಮ ಸ್ವಾದೀನ ಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-2 ನ್ನು ಪೋಲಿಸ್ ಠಾಣೆಯಲ್ಲಿ ತಯಾರು ಮಾಡಿದ್ದು ನಾನು ಅಲ್ಲೇ ಸಹಿ ಮಾಡಿದ್ದೇನೆ

ಎಂದರೆ ಸರಿಯಲ್ಲ. ನಾನು ಮತ್ತು ನನ್ನ ಹೆಂಡತಿ ಜೊತೆಯಲ್ಲಿ ಹೋಗಿದ್ದೆವು ಎಂದರೆ ಸರಿ. ಆ ರೀತಿ ಹೋಗಿದ್ದ ಬಗ್ಗೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**(ಮರು ವಿಚಾರಣೆಃ ಇಲ್ಲ)**

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಎ. ಒಪ್ಪಲಾಗಿದೆ.**

ಪ್ರಧಾನ **ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ದೇವನಹಳ್ಳಿ.**

**ಈ ಹಂತದಲ್ಲಿ ಪಾಟಿ ಸವಾಲು ಮಾಡಲು ಆರೋಪಿ ಪರ ವಕೀಲರು ಕಾಲವಕಾಶ ಕೋರಿದ್ದು, ಕಾಲವಕಾಶ ನೀಡಲು ಯಾವುದೇ ಸಕಾರಣಗಳು ಇಲ್ಲದೆ ಇರುವ ಕಾರಣ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು**

(ಈ ಹಂತದಲ್ಲಿ ಪಾಟಿ ಸವಾಲು ಮಾಡಲು ಆರೋಪಿ ಪರ ವಕೀಲರು ಕಾಲವಕಾಶ ಕೋರಿದ್ದು, ಕಾಲವಕಾಶ ನೀಡಲು ಯಾವುದೇ ಸಕಾರಣಗಳು ಇಲ್ಲದೆ ಇರುವ ಕಾರಣ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

(ಈ ಹಂತದಲ್ಲಿ ಮುಂದುವರಿದ ಮುಖ್ಯ ವಿಚಾರಣೆ ಮಾಡಲು ಮಾನ್ಯ ಸಸಅ ರವರ ವಿನಂತಿಯ ಮೇರೆಗೆ ಮುಂದೂಡಲಾಯಿತು.)

(ಈ ಹಂತದಲ್ಲಿ ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಪಿಸಲು ವಿನಂತಿಸಿದ್ದು, ಮಾನ್ಯ ಸ.ಸ.ಅ ರವರ ಮನವಿಯನ್ನು ಪರಿಗಣಿಪಿಸಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

ಆರೋಪಿ ನನಗೆ ಪರಿಚಯ ಇರುವುದರಿಂದ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಪಿಸಲು ವಿನಂತಿಸಿದ್ದು, ಮಾನ್ಯ ಸ.ಸ.ಅ ರವರ ಮನವಿಯನ್ನು ಪರಿಗಣಿಪಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)